## ಕರ್ನಾಟಕ ಲೋಕಾಯುಕ್ತ

ಕಂ/ಉಪಲೋಕ್/ಎಂವೈಎಸ್/2378/2021/
ಪಿಎ.ಆರ್.ಇ–5

ಬಹುಮಹಡಿಗಳ ಕಟ್ಟಡ,
ಡಾ: ಬಿ.ಆರ್. ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 09/11/2022.

### ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ಅನ್ವಯ ವರದಿ

**ವಿಷಯ:** ಶ್ರೀ. ಶೀಧರ ಹನುಮಂತ ಶಿಂಧೆ, ಹಿಂದಿನ ಪ್ರಥಮ ದರ್ಜೆ ಸಹಾಯಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಚೆನ್ನರಾಯಪಟ್ಟಣ, ಹಾಸನ ಜಿಲ್ಲೆ. (ಹಾಲಿ ಪ್ರಥಮ ದರ್ಜೆ ಸಹಾಯಕರು, ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಚಿಕ್ಕಮಂಗಳೂರು ಜಿಲ್ಲೆ). ಇವರು ಸರ್ಕಾರಿ ಕರ್ತವ್ಯ ನಿರ್ವಹಿಸುವ ಕಾಲಕ್ಕೆ ದುರ್ನಡತೆ ತೋರಿದ ಕುರಿತಂತೆ ಶಿಸ್ತುಕ್ರಮ ಜರುಗಿಸುವ ಬಗ್ಗೆ.

******

ಆರಕ್ಷಕ ನಿರೀಕ್ಷಕರು ಭ್ರಷ್ಟಾಚಾರ ನಿಗ್ರಹ ದಳ ಪೋಲಿಸ್ ಠಾಣೆ ಹಾಸನ (ಇನ್ನು ಮುಂದೆ ತನಿಖಾಧಿಕಾರಿ ಎಂದು ಕರೆಯಲ್ಪಡುತ್ತಾರೆ) ಇವರು ಸಲ್ಲಿಸಿದ ತನಿಖಾ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ ಶ್ರೀ. ಶೀಧರ ಹನುಮಂತ ಶಿಂಧೆ, ಹಿಂದಿನ ಪ್ರಥಮ ದರ್ಜೆ ಸಹಾಯಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಚೆನ್ನರಾಯಪಟ್ಟಣ, ಹಾಸನ ಜಿಲ್ಲೆ. (ಹಾಲಿ ಪ್ರಥಮ ದರ್ಜೆ ಸಹಾಯಕರು, ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಚಿಕ್ಕಮಂಗಳೂರು ಜಿಲ್ಲೆ). (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ಕಾಂತರಾಜು ಬಿನ್ ಲೇಟ್ ಬೈರಯ್ಯ, ಕುಮಾರನಹಳ್ಳಿ ಗ್ರಾಮ, ಬಸವಾ ಹೋಬಳಿ, ಚೆನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ. (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ಇವರು ದೂರು ಸಲ್ಲಿಸಿದ್ದು, ಸದರಿ ದೂರಿನಲ್ಲಿ ಬರೆದುಕೊಂಡ ಅಂಶವೇನೆಂದರೆ, ಶ್ರೀಮತಿ ಸಾವಿತ್ರಮ್ಮ ಕೋಂ ಲೇಟ್ ಗಂಗಾಧರ್ ಇವರು ಅಂಗನವಾಡಿ ಸಹಾಯಕಿ ಹುದ್ದೆಗೆ ಅರ್ಜಿ ಸಲ್ಲಿಸಿದ್ದು, ಸಹಾಯಕಿ ಹುದ್ದೆ ಕೋಡಿಸಲು ಎದುರುದಾರರು ರೂ. 40,000/– ಲಂಚಕ್ಕೆ ಬೇಡಿಕೆ ಇಟ್ಟು, ರೂ. 10,000/– ಲಂಚ ಪಡೆದುಕೊಳ್ಳುವಾಗ ರೆಡ್ ಹ್ಯಾಂಡ್ ಆಗಿ ಸಿಕ್ಕಿ ದುರ್ನಡತೆ ತೋರಿಸಿದ ಬಗ್ಗೆ ಬರೆದುಕೊಂಡಿದ್ದು ಸದರಿ ದೂರು ದಿ:25/09/2018 ರಂದು ಹಾಸನ ಎ.ಸಿ.ಬಿ ಪೋಲಿಸ್ ಠಾಣಾ ಗುನ್ನಾ ನಂ.07/2018ರಲ್ಲಿ ದಾಖಲಾಗಿದ್ದು,

ತನಿಖಾಧಿಕಾರಿಗಳು ತನಿಖೆಯನ್ನು ಪೂರೈಸಿ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ ಕಲಂ 7(ಎ) ಅಡಿಯಲ್ಲಿ ದೋಷಾರೋಪಣ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತಾರೆ. ದೋಷರೋಪಣ ಪಟ್ಟಿಯನ್ನು ಪರಿಶೀಲಿಸಲಾಗಿ ಎದುರುದಾರರಾದ ನೀವು ಸರ್ಕಾರಿ ನೌಕರರಾಗಿ ಕರ್ತವ್ಯ ನಿರ್ವಹಿಸುವ ಕಾಲಕ್ಕೆ 10,000/-ರೂ. ಲಂಚ ಪಡೆದು ದುರ್ನಡತೆ ತೋರಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 7(2) ರನ್ವಯ ಗೌರವಾನ್ವಿತ ಉಪಲೋಕಾಯುಕ್ತರು-02 ಇವರು ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ತನಿಖೆ ಕೈಗೊಂಡಿರುತ್ತಾರೆ.

2. ಎದುರುದಾರರ ಮೇಲಿನ ಆಪಾದನೆಯ ಸಂಕ್ಷಿಪ್ತ ಸಾರಾಂಶ:

i. ದೂರುದಾರರಾದ **ಶ್ರೀ. ಕಾಂತರಾಜು ಬಿನ್ ಲೇಟ್ ಬೈರಯ್ಯ, ಕುಮಾರನಹಳ್ಳಿ ಗ್ರಾಮ, ಬಸವಾ ಹೋಬಳಿ, ಚೆನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ.** ಇವರು ಎದುರುದಾರರ ವಿರುದ್ಧ ದೂರು ಸಲ್ಲಿಸಿದ್ದು, ಸದರಿ ದೂರಿನಲ್ಲಿ ಬರೆದುಕೊಂಡ ಅಂಶವೇನೆಂದರೆ, ಶ್ರೀಮತಿ ಸಾವಿತ್ರಮ್ಮ ಕೋಂ ಲೇಟ್ ಗಂಗಾಧರ್ ಇವರು ಅಂಗನವಾಡಿ ಸಹಾಯಕಿ ಹುದ್ದೆಗೆ ಅರ್ಜಿ ಸಲ್ಲಿಸಿದ್ದು, ದೂರುದಾರರು ಹಾಗೂ ಸಾವಿತ್ರಮ್ಮ ಎದುರುದಾರರ ಕಚೇರಿಗೆ ಹೋದಾಗ ಅಂಗನವಾಡಿ ಸಹಾಯಕಿ ಹುದ್ದೆ ಕೊಡಿಸಲು ಎದುರುದಾರರು ರೂ. 40,000/- ಲಂಚಕ್ಕೆ ಬೇಡಿಕೆ ಇಟ್ಟಿದ್ದು, ದೂರುದಾರರು ರೂ. 20,000/- ಕೊಡುವುದಾಗಿ ಹೇಳಿದ್ದು, ನಂತರ ಚೌಕಾಸಿ ಮಾಡಿ ಎದುರುದಾರರು ರೂ. 30,000/- ಲಂಚ ಕೊಡಲು ತಿಳಿಸಿರುತ್ತಾರೆ. ನಂತರದಲ್ಲಿ ಎದುರುದಾರರು ದಿ: 23/09/2018 ಹಾಗೂ ದಿ: 24/09/2018 ರಂದು ದೂರುದಾರರಿಗೆ ತಮ್ಮ ಮೊಬೈಲ್‌ನಿಂದ ಕರೆ ಮಾಡಿ, ಲಂಚ ನೀಡಲು ಒತ್ತಾಯ ಮಾಡಿದ್ದು, ಅದಕ್ಕೆ ದೂರುದಾರರು ಈಗ ರೂ. 10,000/- ಮಾತ್ರ ಇದ್ದು, ಅದನ್ನು ಕೊಡುವುದಾಗಿ ಹೇಳಿದ್ದು, ಅದಕ್ಕೆ ಎದುರುದಾರರು ಉಳಿದ ರೂ. 20,000/- ಹಣವನ್ನು ನಂತರದಲ್ಲಿ ಕೊಡಬೇಕೆಂದು ಹೇಳಿದ್ದು, ಅದನ್ನು ದೂರುದಾರರು ತಮ್ಮ ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿಕೊಂಡಿರುತ್ತಾರೆ.

ii) ದೂರುದಾರರಿಗೆ ಲಂಚ ನೀಡಲು ಮನಸ್ಸಿಲ್ಲವಾದ್ದರಿಂದ ದಿ:25/09/2018 ರಂದು ಹಾಸನ ಎಸಿಬಿ ಪೋಲಿಸ್ ಠಾಣೆಗೆ ಹೋಗಿ

ದೂರು ಸಲ್ಲಿಸಿದ್ದು, ಸದರಿ ದೂರು ಠಾಣಾ ಗುನ್ನಾ ನಂ.07/2018 ರಲ್ಲಿ, ಕಲಂ 7 (ಎ) ಅಡಿಯಲ್ಲಿ ಭ್ರಷ್ಟಾಚಾರ ನಿಗ್ರಹ ಕಾಯ್ದೆಯಡಿಯಲ್ಲಿ ಪ್ರಕರಣವು ದಾಖಲಾಗಿರುತ್ತದೆ. ಪ್ರಕರಣವು ದಾಖಲಾದ ನಂತರ ತನಿಖಾಧಿಕಾರಿಗಳು ಸರ್ಕಾರಿ ಪಂಚರುಗಳಾದ 1) ಹರೀಶ್‌ಕುಮಾರ್, 2) ನವೀನ್‌ಕುಮಾರ್ (ನೆರಳುಸಾಕ್ಷಿ) ಇವರುಗಳನ್ನು ಬರಮಾಡಿಕೊಂಡಿದ್ದು, ಸದರಿಯವರುಗಳ ಸಮಕ್ಷಮ ದೂರುದಾರರು ತಮ್ಮ ಮೊಬೈಲ್‌ನಲ್ಲಿಯ ಮೆಮೋರಿ ಕಾರ್ಡ್‌ನ್ನು ಹಾಜರುಪಡಿಸಿದ್ದು, ಮೆಮೋರಿ ಕಾರ್ಡ್‌ನಲ್ಲಿಯ ಸಂಭಾಷಣೆಯನ್ನು ಪಂಚರಿಗೆ ಕೇಳಿಸಿ, ಸದರಿ ಸಂಭಾಷಣೆಯನ್ನು ಲಿಪಿಕರಿಸಿ ಸಿ.ಡಿ.ಗಳಿಗೆ ವರ್ಗಾಯಿಸಿಕೊಂಡಿರುತ್ತಾರೆ. ಲಂಚ ನೀಡಲು ತಂದ ರೂ. 10,000/- (500X20) ಗಳನ್ನು ದೂರುದಾರರು ತನಿಖಾಧಿಕಾರಿಗಳ ಮುಂದೆ ಹಾಜರುಪಡಿಸಿದ್ದು, ಸದರಿ ನೋಟುಗಳ ನಂಬರುಗಳನ್ನು ಪಂಚರು ಬಿಳಿ ಹಾಳೆಯಲ್ಲಿ ದಾಖಲಿಸಿಕೊಂಡಿರುತ್ತಾರೆ. ಪೋಲಿಸ್ ಸಿಬ್ಬಂದಿ ನೋಟುಗಳಿಗೆ ಫಿನಾಪ್ತಲಿನ್ ಪೌಡರನ್ನು ಸವರಿ ಸದರಿ ಹಣವನ್ನು ಪಂಚಸಾಕ್ಷಿ-1 ಹರೀಶ್‌ಕುಮಾರ್ ಇವರ ಮೂಲಕ ದೂರುದಾರರ ಪ್ಯಾಂಟ್ ಜೇಬಿನಲ್ಲಿ ಇಡಿಸಿರುತ್ತಾರೆ. ನಂತರ ಹರೀಶ್‌ಕುಮಾರ್ ಇವರ ಎರಡೂ ಕೈಗಳನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ತೊಳೆಯಲಾಗಿ ದ್ರಾವಣವು ಗುಲಾಬಿ ಬಣ್ಣಕ್ಕೆ ತಿರುಗಿದ್ದು, ಫಿನಾಪ್ತಲಿನ್ ಪೌಡರಿನ ಗುಣಧರ್ಮವನ್ನು ದೂರುದಾರರು ಹಾಗೂ ಪಂಚರಿಗೆ ಮನವರಿಕೆ ಮಾಡಿಕೊಟ್ಟಿರುತ್ತಾರೆ. ನೆರಳುಸಾಕ್ಷಿಯಾದ ನವೀಕ್‌ಕುಮಾರ್ ಇವರಿಗೆ ದೂರುದಾರರೊಂದಿಗೆ ಹೋಗಿ ಲಂಚವನ್ನು ನೀಡುವ ಕಾಲಕ್ಕೆ ನಡೆಯುವ ಸಂಭಾಷಣೆ ಹಾಗೂ ವಿದ್ಯಮಾನಗಳನ್ನು ಗಮನಿಸಬೇಕು ಎಂದು ಸೂಚನೆ ನೀಡಿರುತ್ತಾರೆ. ಎದುರುದಾರರು ಲಂಚದ ಹಣವನ್ನು ಕೇಳಿದಾಗ ಮಾತ್ರ ಕೊಡುವಂತೆ ಮತ್ತು ಹಣ ಪಡೆದುಕೊಂಡ ನಂತರ ಕೈಯಿಂದ ತಲೆ ಸವರಿಕೊಳ್ಳುವ ಮೂಲಕ ಸಂಜ್ಞೆ ನೀಡಬೇಕೆಂದು ತಿಳಿಸಿರುತ್ತಾರೆ. ಹಣ ನೀಡುವ ಕಾಲಕ್ಕೆ ನಡೆಯುವ ಸಂಭಾಷಣೆಯನ್ನು ರೆಕಾರ್ಡ್ ಮಾಡಿಕೊಳ್ಳಲು ವಾಯ್ಸ್ ರೆಕಾರ್ಡರನ್ನು ನೀಡಿರುತ್ತಾರೆ. ಈ ಎಲ್ಲಾ ಘಟನಾವಳಿಗಳನ್ನು ದಿ: 25-09-2018 ರಂದು ಮಧ್ಯಾಹ್ನ 12:30 ರಿಂದ 2.30 ಘಂಟೆಯವರೆಗೆ ಹಾಸನ ಎಸಿಬಿ ಕಛೇರಿಯಲ್ಲಿ ಬರೆದ ಪ್ರಯೋಗಿಕ ಪಂಚನಾಮೆಯಲ್ಲಿ ದಾಖಲಿಸಿರುತ್ತಾರೆ.

iii) ಪ್ರಾಯೋಗಿಕ ಪಂಚನಾಮೆ ಮುಗಿದ ನಂತರ ಎದುರುದಾರರು ದೂರುದಾರರಿಗೆ ಫೋನ್ ಮಾಡಿದ್ದು, ತಾನು ಕಚೇರಿಯ ಕೆಲಸದ ನಿಮಿತ್ತ ಹಾಸನಗೆ ಬಂದಿರುವುದಾಗಿ ಮತ್ತು ಹಾಸನ ಬಸ್‌ಸ್ಟ್ಯಾಂಡ್ ಹತ್ತಿರ ಬಂದು ತನಗೆ ಫೋನ್ ಮಾಡುವಂತೆ ತಿಳಿಸಿರುತ್ತಾನೆ. ದಾಳಿತಂಡದವರು ಹಾಸನ ಬಸ್‌ಸ್ಟ್ಯಾಂಡ್ ಹತ್ತಿರ 4:00 ಗಂಟೆಗೆ ತಲುಪಿದ್ದು, ಎದುರುದಾರರಿಗೆ ದೂರುದಾರರು ಫೋನ್ ಮಾಡಲಾಗಿ ತಾನು ರೈಲ್ವೆ ಟ್ರ್ಯಾಕ್ ಬಳಿ, ಹೊಸ ಬಸ್ ನಿಲ್ದಾಣಕ್ಕೆ ಹೋಗುವ ದಾರಿ ಹತ್ತಿರ ಇರುವ ಟೀ ಅಂಗಡಿ ಹತ್ತಿರ ಇರುವುದಾಗಿ ತಿಳಿಸಿದ್ದು, ಆಗ ದಾಳಿತಂಡದವರು ದೂರುದಾರರನ್ನು ಹಾಗೂ ನೆರಳು ಸಾಕ್ಷಿಯನ್ನು ಟೀ ಅಂಗಡಿ ಹತ್ತಿರ ಕಳುಹಿಸಿ, ಸ್ವಲ್ಪ ದೂರದಲ್ಲಿ ಗುಪ್ತವಾಗಿ ಸಂಜ್ಞೆಗಾಗಿ ಕಾಯುತ್ತಾ ನಿಂತಿರುತ್ತಾರೆ. ಎದುರುದಾರರು ತಾನು ಹೇಳಿದಂತೆ ಟೀ ಅಂಗಡಿಯಲ್ಲಿ ಇದ್ದು, ದೂರುದಾರರಿಗೆ ಹಣ ತಂದಿದ್ದಿಯಾ ಎಂದು ಕೇಳಿದ್ದು, ಅದಕ್ಕೆ ದೂರುದಾರರು ಆದೇಶವನ್ನು ಯಾವಾಗ ಕೊಡುತ್ತೀರಿ ಎಂದು ಕೇಳಿದ್ದು, ಅದಕ್ಕೆ ಎದುರುದಾರರು 15 ದಿನದಲ್ಲಿ ಕೊಡಿಸುವುದಾಗಿ ಹೇಳಿ ಮೊದಲು ಹಣ ಕೊಡುವಂತೆ ಒತ್ತಾಯಿಸಿರುತ್ತಾನೆ. ದೂರುದಾರರು ಸುಮಾರು 4:10 ಗಂಟೆಯ ಸಮಯಕ್ಕೆ ಎದುರುದಾರರಿಗೆ ಹಣವನ್ನು ನೀಡಿದ್ದು, ಎದುರುದಾರರು ಹಣವನ್ನು ಬಲಗೈಯಿಂದ ಪಡೆದು ತಮ್ಮ ಪ್ಯಾಂಟ್ ಜೇಬಿನಲ್ಲಿ ಇಟ್ಟುಕೊಂಡಿರುತ್ತಾರೆ. ಹಣ ಪಡೆದ ನಂತರ ದೂರುದಾರರು ತನಿಖಾಧಿಕಾರಿಗೆ ಸಂಜ್ಞೆ ನೀಡಿದ್ದು, ತಕ್ಷಣ ತನಿಖಾಧಿಕಾರಿಗಳು ಟೀ ಅಂಗಡಿಯ ಒಳಗೆ ಬಂದು ತಮ್ಮ ಪರಿಚಯ ಮಾಡಿಕೊಂಡು, ಪ್ರಕರಣ ದಾಖಲಾದ ಬಗ್ಗೆ ತಿಳಿಸಿ, ತನಿಖೆಗೆ ಸಹಕರಿಸುವಂತೆ ಎದುರುದಾರರಿಗೆ ತಿಳಿಸಿರುತ್ತಾರೆ. ಸೋಡಿಯಂ ಕಾರ್ಬೋನೆಟ್ ದ್ರಾವಣದಲ್ಲಿ ಎದುರುದಾರರ ಬಲಗೈ ಬೆರಳುಗಳನ್ನು ತೊಳೆಯಲಾಗಿ ದ್ರಾವಣವು ಗುಲಾಬಿ ಬಣ್ಣಕ್ಕೆ ತಿರುಗಿರುತ್ತದೆ. ಎದುರುದಾರರ ಎಡಗೈ ಬೆರಳುಗಳನ್ನು ತೊಳೆಯಲಾಗಿ ದ್ರಾವಣದ ಬಣ್ಣ ಬದಲಾವಣೆಯಾಗಿರುವುದಿಲ್ಲ. ಹಣದ ಬಗ್ಗೆ ವಿಚಾರಿಸಲಾಗಿ, ಎದುರುದಾರರು ತಮ್ಮ ಪ್ಯಾಂಟಿನಲ್ಲಿದ್ದ ಹಣವನ್ನು ಹಾಜರುಪಡಿಸಿದ್ದು, ಸದರಿ ಹಣವು ಈ ಮೊದಲೇ ದಾಖಲಿಸಿಕೊಂಡ ನೋಟುಗಳ ನಂಬರ್‌ಗಳೊಂದಿಗೆ ತಾಳೆ ಹೊಂದಿದ ಮೇರೆಗೆ ಸದರಿ ಹಣವನ್ನು ತನಿಖಾಧಿಕಾರಿಯವರು ಅಮಾನತ್ತು ಪಡಿಸಿಕೊಂಡಿರುತ್ತಾರೆ. ಲಂಚ ನೀಡುವ ಕಾಲಕ್ಕೆ ನಡೆಯುವ ಸಂಭಾಷಣೆಯನ್ನು ವಾಯ್ಸ್

ರೆಕಾರ್ಡರ್‌ನಲ್ಲಿ ರೆಕಾರ್ಡ್ ಮಾಡುವುದನ್ನು ಮರೆತಿರುವುದಾಗಿ ತಿಳಿಸಿರುತ್ತಾರೆ. ಸದರಿ ಸ್ಥಳವು ಟೀ ಅಂಗಡಿ ಆಗಿದ್ದರಿಂದ ಬೆಳಕಿನ ವ್ಯವಸ್ಥೆ ಇಲ್ಲವಾದ್ದರಿಂದ ಮತ್ತು ಈ ಪ್ರಕರಣಕ್ಕೆ ಸಂಬಂಧಿಸಿದ ಕಡತವು ಉಪನಿರ್ದೇಶಕರ ಕಚೇರಿಯಲ್ಲಿ ಇರುವುದಾಗಿ ಎದುರುದಾರರು ತಿಳಿಸಿದ್ದರಿಂದ ಮಹಜರ್‌ನ್ನು ಸಂಜೆ 5:30 ಗಂಟೆಯವರೆಗೆ ಬರೆದು, ಉಪನಿರ್ದೇಶಕರ ಕಚೇರಿಗೆ ಬಂದು, ಮುಂದಿನ ಮಹಜರ್ ಕ್ರಮ ಜರುಗಿಸಿರುತ್ತಾರೆ.

iv) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಗೆ ಬಂದು ಹಿರಿಯ ಸಹಾಯಕ ನಿರ್ದೇಶಕರ ಕೊಠಡಿಯಲ್ಲಿ ಮಹಜರ್ ಕ್ರಮ ಮುಂದುವರೆಸಿರುತ್ತಾರೆ. ಎದುರುದಾರರಿಗೆ ಬೇರೆ ಪ್ಯಾಂಟಿನ ವ್ಯವಸ್ಥೆ ಮಾಡಿ, ಪ್ಯಾಂಟ್ ಜೇಬನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ತೊಳೆಯಲಾಗಿ ದ್ರಾವಣವು ನಸು ಗುಲಾಬಿ ಬಣ್ಣಕ್ಕೆ ತಿರುಗಿರುತ್ತದೆ. ತನಿಖಾಧಿಕಾರಿಗಳು ಪ್ಯಾಂಟ್‌ನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ. ಲಂಚಕ್ಕೆ ಬೇಡಿಕೆಯಿಟ್ಟ ಸಂಭಾಷಣೆಯನ್ನು ಕಚೇರಿಯಲ್ಲಿ ಹಾಜರಿದ್ದ ಹಿರಿಯ ಅಧಿಕಾರಿ ಧರಣಿಕುಮಾರ್ ಇವರಿಗೆ ಕೇಳಿಸಲಾಗಿ ಸದರಿಯವರು ಸಂಭಾಷಣೆಯಲ್ಲಿಯ ಒಂದು ಧ್ವನಿಯು ಎದುರದಾರರೆಂದು ಗುರ್ತಿಸಿರುತ್ತಾರೆ. ಕಡತದ ಬಗ್ಗೆ ಕೇಳಲಾಗಿ ಧರಣಿಕುಮಾರ್‌ರವರು ಕಡತದ ಛಾಯಾ ಪ್ರತಿಗಳನ್ನು ತಯಾರಿಸಿ, ದೃಢೀಕರಿಸಿ ಹಾಜರುಪಡಿಸಿದ ಮೇರೆಗೆ ಅಮಾನತುಪಡಿಸಿಕೊಂಡಿರುತ್ತಾರೆ. ಕಡತದೊಂದಿಗೆ ಹಾಜರಾತಿ ಪುಸ್ತಕದ ಪ್ರತಿಯನ್ನು ಪಡೆದುಕೊಂಡಿರುತ್ತಾರೆ. ಎದುರುದಾರರಿಗೆ ರಕ್ಷಣಾ ಹೇಳಿಕೆಯನ್ನು ಬರೆದುಕೊಡಲು ತಿಳಿಸಿದ್ದು, ಅದಕ್ಕೆ ಎದುರುದಾರರು ಬರೆದುಕೊಟ್ಟಿದೆನೆಂದರೆ, ದೂರುದಾರರು ತನಗೆ ಹಣ ಎಣಿಸಲು ಆಗುತ್ತಿಲ್ಲ ಎಂದು ನನಗೆ ಎಣಿಸಲು ಕೊಟ್ಟಿದ್ದು, ತಾನು ಹಣವನ್ನು ಎಣಿಸಿರುವುದಾಗಿ ಮತ್ತು ಸದರಿ ಹಣವನ್ನು ತಾನು ಊರಿಗೆ ಹೋಗಿ ಬರುವವರೆಗೆ ಇಟ್ಟುಕೊಳ್ಳಲು ತಿಳಿಸಿದ್ದರಿಂದ ತಾನು ಹಣವನ್ನು ಇಟ್ಟುಕೊಂಡಿರುವುದಾಗಿ ಬರೆದು ಕೊಟ್ಟಿರುತ್ತಾನೆ. ಮುಂದುವರೆದು ತನಿಖಾಧಿಕಾರಿಗಳು ದೂರುದಾರರು ಹಾಗೂ ಎದುರುದಾರರ ಮಾದರಿ ಧ್ವನಿಯನ್ನು ಪಡೆದುಕೊಂಡಿರುತ್ತಾರೆ. ಈ ಎಲ್ಲಾ ಪ್ರಕ್ರಿಯೆಗಳನ್ನು ತನಿಖಾಧಿಕಾರಿಗಳು ದಿ: 25/09/2018 ರಂದು ಸಂಜೆ

6:00 ಗಂಟೆಯಿಂದ 8:30 ವರೆಗೆ ಗಂಟೆಯವರೆಗೆ ಹಾಸನ ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯಲ್ಲಿ ಬರೆದ ಟ್ರ್ಯಾಪ್ ಮಹಜರ್‌ನಲ್ಲಿ ದಾಖಲಿಸಿರುತ್ತಾರೆ.

v) ತನಿಖಾ ಕಾಲದಲ್ಲಿ ಎದರುದಾರರ ಬಲಗೈ ಬೆರಳುಗಳನ್ನು ಹಾಗೂ ಪ್ಯಾಂಟ್ ಜೇಬನ್ನು ತೊಳೆದ ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಫಿನಾಪ್ತಲಿನ್ ಅಂಶ ಪತ್ತೆ ಆಗಿರುವುದು ರಾಸಾಯನಿಕ ಪರೀಕ್ಷಾ ವರದಿಯಿಂದ ಕಂಡುಬರುತ್ತದೆ. ಎದುರುದಾರರು ದೂರುದಾರರೊಂದಿಗೆ ಮಾಡಿದ ಸಂಭಾಷಣೆಯಲ್ಲಿಯ ಒಂದು ಧ್ವನಿಯು ಎದುರುದಾರರದೆಂದು ಅವರ ಹಿರಿಯ ಅಧಿಕಾರಿಯಾದ ಧರಣಿಕುಮಾರ್ ಗುರ್ತಿಸಿರುತ್ತಾರೆ.

vi) ತನಿಖಾಧಿಕಾರಿಗಳು ಪ್ರಕರಣಕ್ಕೆ ಸಂಬಂಧಿಸಿದ ಪ್ರಮುಖ ಘಟನಾವಳಿಗಳನ್ನು ಚಿತ್ರೀಕರಿಸಿರುತ್ತಾರೆ. ಎದುರುದಾರರನ್ನು ಅಂದೇ ದಸ್ತಗಿರಿ ಮಾಡಿ ನ್ಯಾಯಾಲಯಕ್ಕೆ ಹಾಜರಪಡಿಸಿರುತ್ತಾರೆ. ಎದುರುದಾರರನ್ನು ಅಭಿಯೋಜನೆಗೊಳಿಸಲು ಅಭಿಯೋಜನಾ ಮಂಜೂರಾತಿ ಆದೇಶವನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದುಕೊಂಡಿರುತ್ತಾರೆ.

3. ಎದುರುದಾರರು ಪರಿವೀಕ್ಷಣಾ ಟಿಪ್ಪಣಿಗೆ ತಮ್ಮ ಪತ್ರ ದಿನಾಂಕ:15/06/2022 ರಂತೆ ಸಮಜಾಯಿಷಿಯನ್ನು ಸಲ್ಲಿಸಿರುತ್ತಾರೆ. ಸದರಿಯವರು ತಮ್ಮ ಸಮಜಾಯಿಸಿಯಲ್ಲಿ ತಾನು ಪ್ರಥಮ ದರ್ಜೆ ಸಹಾಯಕನಾಗಿದ್ದು, ತನಗೆ ಅಂಗನವಾಡಿ ಸಹಾಯಕಿಯ ಹುದ್ದೆ ಕೊಡಿಸುವ ಅಧಿಕಾರ ಇರುವುದಿಲ್ಲ. ಅಂಗನವಾಡಿ ಸಹಾಯಕಿಯರ ನೇಮಕಾತಿಯಲ್ಲಿ ಭಷ್ಟಾಚಾರ ನಡೆಯಬಹುದೆಂದು ಗೌರವಾನ್ವಿತ ನ್ಯಾಯಮೂರ್ತಿಗಳಾದ ಶ್ರೀ ಎನ್.ಕೆ. ಪಾಟೀಲ್ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿದ್ದು ಸಮಿತಿಯು ನೇಮಕಾತಿಗೆ ಸಂಬಂಧಪಟ್ಟಂತೆ ಮಾರ್ಗಸೂಚಿಗಳನ್ನು ಹೊರಡಿಸಿದೆ. ಪ್ರತಿ ಜಿಲ್ಲೆಯಲ್ಲಿಯೂ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಲಾಗಿರುತ್ತದೆ. ಸಮಿತಿಯನ್ನು ಹೊರತುಪಡಿಸಿ ಬೇರೆ ವ್ಯಕ್ತಿಗಳಿಗೆ ಅಂಗನವಾಡಿ ಸಹಾಯಕಿಯರನ್ನು ಆಯ್ಕೆ ಮಾಡಲು ಸಾಧ್ಯವಿರುವುದಿಲ್ಲ. ಅರ್ಜಿದಾರರು ಆನ್‌ಲೈನಲ್ಲಿ ಅರ್ಜಿ ಸಲ್ಲಿಸಿದ ನಂತರ ತಾಲೂಕಾ ಶಿಶು ಅಭಿವೃದ್ಧಿ ಅಧಿಕಾರಿಗಳು ಪರಿಶೀಲಿಸಿ, ಸರಿಯಾಗಿ ಇದ್ದ ಅರ್ಜಿಗಳನ್ನು ಉಪ-ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರ ಸುಪರ್ದಿಗೆ ನೀಡುತ್ತಾರೆ, ನಂತರ ಸಮಿತಿಯವರು ಆಯ್ಕೆ ಪಟ್ಟಿಯನ್ನು ಬಿಡುಗಡೆ ಮಾಡುತ್ತಾರೆ. ತನ್ನ ಕೆಲಸ

ಕಡತದಲ್ಲಿ ಟಿಪ್ಪಣಿ ಬರೆಯುವುದು ಮಾತ್ರ ಆಗಿರುತ್ತದೆ. ಆದ್ದರಿಂದ ದೂರುದಾರರು ನನ್ನ ಮೇಲೆ ಮಾಡಿದ ಆಪಾದನೆಯು ಸತ್ಯಕ್ಕೆ ದೂರವಾಗಿರುತ್ತದೆ. ದೂರುದಾರರು ದೂರು ಸಲ್ಲಿಸಿದಾಗ ಅವರಿಗೆ ಸಂಬಂಧಿಸಿದ ಯಾವುದೇ ಕಡತವು ತನ್ನ ಬಳಿ ಇರಲಿಲ್ಲ, ತಾನು ಲಂಚ ಕೇಳುವ ಪ್ರಮೇಯವೇ ಉದ್ಭವಿಸುವುದಿಲ್ಲ. ಎದುರುದಾರರು ತನ್ನ ಮೇಲೆ ಮಾಡಿದ ಎಲ್ಲಾ ಆಪಾದನೆಗಳನ್ನು ಅಲ್ಲಗಳೆದಿರುತ್ತಾರೆ. ಮೆಮರಿಕಾರ್ಡ್‌ನಲ್ಲಿರುವ ಸಂಭಾಷಣೆಯು ತನ್ನದಲ್ಲ. ತಾನು ಕೆಲಸಕ್ಕೆ ಸೇರಿ ಕೇವಲ ಮೂರು ತಿಂಗಳು ಗತಿಸಿದ್ದು, ಪರಿವೀಕ್ಷಣಾ ಅವಧಿ ಕೂಡ ಮುಗಿದಿರುವುದಿಲ್ಲ. ದೂರುದಾರರು ತನ್ನ ತೇಜೋವಧೆ ಮಾಡಲು ಸುಳ್ಳು ದೂರು ಸಲ್ಲಿಸಿರುತ್ತಾರೆ. ಈಗಾಗಲೇ ತನ್ನ ಮೇಲೆ ಹಾಸನ ಸತ್ರ ನ್ಯಾಯಾಲಯದಲ್ಲಿ ಕ್ರಿಮಿನಲ್ ಕೇಸ್ ನಡೆಯುತ್ತಿದ್ದು, ಒಂದೇ ಆಪಾದನೆಗೆ ಸಂಬಂಧಿಸಿದಂತೆ ಎರಡು ತನಿಖೆ ನಿಷಿದ್ದವೆಂದು ಬರೆಯುತ್ತಾ, ಕಲಬುರ್ಗಿ ಉಚ್ಚ ನ್ಯಾಯಾಲಯದ ಪ್ರಕರಣ ಸಂಖ್ಯೆ:203239/2019ರಲ್ಲಿ ನೀಡಿದ ತೀರ್ಪನ್ನು ಉಲ್ಲೇಖಿಸಿರುತ್ತಾರೆ. ಮೇಲ್ಕಂಡ ಕಾರಣಗಳಿಂದ ತನ್ನ ಮೇಲೆ ದಾಖಲಾದ ದೂರನ್ನು ಕೈಬಿಡಬೇಕೆಂದು ವಿನಂತಿಸಿಕೊಂಡಿರುತ್ತಾರೆ.

4. ತನಿಖಾ ಕಾಲದಲ್ಲಿ ಸಂಗ್ರಹಿಸಿದ ದಾಖಲೆ ಹಾಗೂ ಸಾಕ್ಷ್ಯಾಧಾರಗಳನ್ನು ಪರಿಶೀಲಿಸಲಾಗಿ ಎದುರುದಾರರು ಸರ್ಕಾರಿ ಕರ್ತವ್ಯ ನಿರ್ವಹಿಸುವ ಕಾಲಕ್ಕೆ ಭ್ರಷ್ಟಾಚಾರ ಎಸಗುವ ಮೂಲಕ ದುರ್ನಡತೆ ಎಸಗಿರುವುದು ಮೇಲ್ನೋಟದಲ್ಲಿ ಕಂಡುಬರುತ್ತದೆ. ತನಿಖಾಧಿಕಾರಿ ತನಿಖಾ ಕಾಲದಲ್ಲಿ ಸಂಗ್ರಹಿಸಿದ ಸಾಕ್ಷ್ಯಾಧಾರಗಳನ್ನು ನಂಬದಿರಲು ಹಾಗೂ ಎದುರುದಾರರು ತಮ್ಮ ಸಮಜಾಯಿಷಿಯಲ್ಲಿ ನಿವೇದಿಸಿಕೊಂಡ ನಿಲುವುಗಳನ್ನು ಒಪ್ಪಲು ಈ ಹಂತದಲ್ಲಿ ಯಾವುದೇ ಬಲವಾದ ಹಾಗೂ ಸಮಂಜಸವಾದ ಆಧಾರಗಳು ಇರುವುದಿಲ್ಲ. ಇಲಾಖಾ ವಿಚಾರಣೆ ನಡೆಸಿದಲ್ಲಿ ಪ್ರಕರಣದ ಸತ್ಯಾಸತ್ಯತೆಯನ್ನು ಕಂಡುಕೊಳ್ಳಬಹುದಾಗಿದೆ. ಆದ್ದರಿಂದ ಎದುರುದಾರರು ಇಲಾಖಾ ವಿಚಾರಣೆಗೆ ಒಳಪಡಲು ಬಾಧ್ಯರಾಗಿರುತ್ತಾರೆ.

5. ಈ ಮೇಲ್ಕಂಡ ಅಂಶಗಳನ್ನು ಮತ್ತು ತನಿಖಾ ವರದಿಯ ವಿವರಗಳನ್ನು ಪರಿಶೀಲಿಸಲಾಗಿ ಎದುರುದಾರರು ತಮ್ಮ ಕರ್ತವ್ಯದಲ್ಲಿ ಸಂಪೂರ್ಣ ನೀತಿ, ನಿಷ್ಠೆ ಹಾಗೂ ಶ್ರದ್ದೆಯನ್ನು ಹೊಂದಿರದೇ, ಸರ್ಕಾರಿ ನೌಕರನಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು, ಭ್ರಷ್ಟಾಚಾರವೆಸಗಿ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ನಿಯಮ 3(1)(i) ರಿಂದ (iv) ನ್ನು ಉಲ್ಲಂಘಿಸಿ, ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ.

6. ಆದ್ದರಿಂದ ಎದುರುದಾರರಾದ **ಶ್ರೀ. ಶೀಧರ ಹನುಮಂತ ಶಿಂಧೆ, ಹಿಂದಿನ ಪ್ರಥಮ ದರ್ಜೆ ಸಹಾಯಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಚೆನ್ನರಾಯಪಟ್ಟಣ, ಹಾಸನ ಜಿಲ್ಲೆ. (ಹಾಲಿ ಪ್ರಥಮ ದರ್ಜೆ ಸಹಾಯಕರು, ಉಪನಿರ್ದೇಶಕರ**

ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಚಿಕ್ಕಮಂಗಳೂರು ಜಿಲ್ಲೆ). (ನಿವೃತಿ ದಿ:31/03/2041) ಇವರು ಎಸಗಿದ ದುರ್ನಡತೆಗೆ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿರ್ಭಂಧ ಮತ್ತು ಮೇಲ್ಮನವಿ) ನಿಯಮಗಳು 1957, ನಿಯಮ 14(ಎ) ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಅನುಮತಿಸಿ, ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರಲ್ಲಿ ಪ್ರದತ್ತವಾದ ಅಧಿಕಾರದ ಅಡಿ ಸಕ್ಷಮ ಪ್ರಾಧಿಕಾರವಾದ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

ಮುಂದುವರೆದು ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(4) ರ ಪ್ರಕಾರ ಶಿಸ್ತು ಪ್ರಾಧೀಕಾರವು ಈ ವರದಿ ಅನ್ವಯ ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಿರುವ ಕ್ರಮದ ಬಗ್ಗೆ ಈ ವರದಿ ತಲುಪಿದ ದಿನಾಂಕದಿಂದ ಮೂರು (3) ತಿಂಗಳ ಒಳಗಾಗಿ ಈ ಪ್ರಾಧಿಕಾರಕ್ಕೆ ತಿಳಿಸುವುದು

09/11/22

(ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ)
ಉಪಲೋಕಾಯುಕ್ತರು-2
ಕರ್ನಾಟಕ ರಾಜ್ಯ, ಬೆಂಗಳೂರು.